ತುಂಗಾ ಮೇಲ್ದಂಡೆ ಯೋಜನೆ

1703 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ತುಂಗಾ ಮೇಲ್ದಂಡೆ ಯೋಜನೆಯ ಬಗ್ಗೆ ಆಂಧ್ರ ಸರಕಾರವು ತಕರಾರು ತೆಗೆದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)*

ಆ) *ಆಂಧ್ರ ಸರಕಾರದ ತಕರಾರಿನ ರಾಜ್ಯ ಸರಕಾರದವರು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಕೆ.ಎನ್. ನಾಗೇಗೌಡ (ಬೃಹತ್ ನೀರಾವರಿ ಮಂತ್ರಿಗಳು) :

ಅ) ಬಂದಿದೆ.

ಆ) ಸದರಿ ಯೋಜನೆಯನ್ನು ಬಚಾವತ್ ತೀರ್ಪಿನ ಚೌಕಟ್ಟಿನಲ್ಲಿಯೇ ತೆಗೆದುಕೊಳ್ಳಲಾಗಿರುವುದರಿಂದ ಇದರ ಬಗ್ಗೆ ಸದರಿ ತೀರ್ಪಿನ ಉಲ್ಲಂಘನೆಯಾಗುವುದಿಲ್ಲವೆಂದು ಆಂಧ್ರ ಸರ್ಕಾರಕ್ಕೆ ಸ್ಪಷ್ಟೀಕರಿಸಲಾಗಿದೆ.

ಸಣ್ಣ ನೀರಾವರಿ ಇಲಾಖೆಯ ಕೆಲಸಗಳು

1704 - ಯು.ಬಿ. ಬಣಕಾರ್ ((ಹಿರೇಕೆರೂರು) : ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸಣ್ಣ ನೀರಾವರಿಗಾಗಿ ೧೯೯೬-೯೭ನೇ ಸಾಲಿನಲ್ಲಿ ಜಿಲ್ಲಾವಾರು ಯೋಜನೆ ಯೋಜನೇತರ ಲೆಕ್ಕ ಶೀರ್ಷಿಕೆ ಯಡಿಯಲ್ಲಿ ಹಣ ಖರ್ಚು ಮಾಡಿದ ವಿವರ ನೀಡುವುದು?*

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು) :

ಅ) (ಲಕ್ಷ ರೂ.ಗಳಲ್ಲಿ)

ಯೋಜನೆ	:	8576.84
ಯೋಜನೇತರ	:	2119.55
ಒಟ್ಟು	:	10696.39

(ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ)